ಸಾಕ್ಷಿಯನ್ನು ದಿನಾಂಕಃ-**31-05-2024** ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ- ವಾದಿ ಪರ ವಕೀಲರಿಂದಃ-

ದಿನಾಂಕ 19-11-2022 ರ ಚೆಕ್ಕನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸದರಿ ಚೆಕ್ಕಿಗೆ ಪ್ರತಿವಾದಿ ಸಹಿ ಹಾಕಿದ್ದು, ಅದನ್ನು ನೋಡಿದರೆ ಗುರುತಿಸುತ್ತೇನೆ. ಸದರಿ ಸಹಿಯನ್ನು ಸಾಕ್ಷಿ ಗುರುತಿಸಿದ್ದರಿಂದ ಅದನ್ನು ನಿಪಿ-1ಎ ಅಂತಾ ಗುರುತಿಸಲಾಯಿತು. ಬ್ಯಾಂಕಿನವರು ಕೊಟ್ಟಂತಹ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು, ಪ್ರತಿವಾದಿಗೆ ಕೊಟ್ಟಂತಹ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-3 ಎಂದು, ಪ್ರತಿವಾದಿಗೆ ಕೊಟ್ಟಂತಹ ಇನ್ನೊಂದು ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ಜಾರಿಯಾಗದೇ ಮರಳಿ ಬಂದ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು, ಮೂರು ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-6 ರಿಂದ ನಿಪಿ-8 ಎಂದು, ಎರಡು ಅಂಚೆ ಸ್ವೀಕೃತ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-9 ಮತ್ತು ನಿಪಿ-10ಎಂದು, ದಿನಾಂಕ 16-02-2023 ರಂದು ಅಂಚೆ ಕಚೇರಿಗೆ ಕೊಟ್ಟಂತಹ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ್ದರಿಂದ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

Sd/-

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.